## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಕೃಷ್ಣಯ್ಯ ಶೆಟ್ಟಿ, ಸದಸ್ಯರು, ಕೊಕ್ಕರ್ಣೆ ಗ್ರಾಮ ಪಂಚಾಯತಿ, ಉಡುಪಿ ತಾಲ್ಲೂಕು, ಉಡುಪಿ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ರನ್ವಯ ಕ್ರಮ ಕೈಗೊಳ್ಳುವ ಬಗ್ಗೆ.

**ಓದಲಾಗಿದೆ:**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ, ಉಡುಪಿ ಜಿಲ್ಲೆ ರವರ ಪತ್ರ ಸಂಖ್ಯೆ: ಜಿಪಂಉ:ಕೌನ್ಸಿಲ್:ಸಿಆರ್107/2016-17, ದಿನಾಂಕ: 28.07.2017
2. ಸರ್ಕಾರದ ಇದೇ ಸಮಸಂಖ್ಯೆಯ ವಿಚಾರಣಾ ತಿಳುವಳಿಕೆ ಪತ್ರ ದಿನಾಂಕ: 29.08.2017.
3. ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯುತಿ, ಉಡುಪಿ ತಾಲ್ಲೂಕು ರವರ ಪತ್ರ ಸಂಖ್ಯೆ: ತಾಪಂಉ/ಪ.ನಂ 101/2017-18, ದಿನಾಂಕ: 06.09.2017

**ಪ್ರಸ್ತಾವನೆ :**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ ಶ್ರೀ ಕೃಷ್ಣಯ್ಯ ಶೆಟ್ಟಿ, ಸದಸ್ಯರು, ಕೊಕ್ಕರ್ಣೆ ಗ್ರಾಮ ಪಂಚಾಯತಿ, ಉಡುಪಿ ತಾಲ್ಲೂಕು, ಉಡುಪಿ ಜಿಲ್ಲೆ ರವರು ದಿನಾಂಕ: 28.04.2016, 31.05.2016, 30.06.2016 ಮತ್ತು 30.07.2016 ರಂದು ನಡೆದ ಗ್ರಾಮ ಪಂಚಾಯತಿಯ ಸಾಮಾನ್ಯ ಸಭೆಗಳಿಗೆ, ಪಂಚಾಯತಿಯ ಅನುಮತಿ ಇಲ್ಲದೆ ನಿರಂತರವಾಗಿ ನಾಲ್ಕು ಸಾಮಾನ್ಯ ಸಭೆಗಳಿಗೆ ಗೈರು ಹಾಜರಾಗಿದ್ದು, ಸದರಿ ಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆಯ ಪ್ರಕರಣ 43(ಎ) ರನ್ವಯ ಕ್ರಮ ಕೈಗೊಳ್ಳಲು ದಿನಾಂಕ: 28.07.2017 ರಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ, ಉಡುಪಿ ಜಿಲ್ಲೆ ರವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಶ್ರೀ ಕೃಷ್ಣಯ್ಯ ಶೆಟ್ಟಿ, ಸದಸ್ಯರು, ಕೊಕ್ಕರ್ಣೆ ಗ್ರಾಮ ಪಂಚಾಯತಿ, ಉಡುಪಿ ತಾಲ್ಲೂಕು, ಉಡುಪಿ ಜಿಲ್ಲೆ ಇವರಿಗೆ ದಿನಾಂಕ: 07.09.2017 ರಂದು ಲಿಖಿತ ಹೇಳಿಕೆಯೊಂದಿಗೆ ಹಾಜರಾಗುವಂತೆ ತಿಳಿಸಿ ದಿನಾಂಕ: 29-08-2017 ರಂದು ವಿಚಾರಣಾ ತಿಳುವಳಿಕೆ ಪತ್ರವನ್ನು ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ದಿನಾಂಕ: 07.09.2017 ರಂದು ವಿಚಾರಣೆಗೆ ಹಾಜರಾಗುವಂತೆ ಶ್ರೀ ಕೃಷ್ಣಯ್ಯ ಶೆಟ್ಟಿ, ಸದಸ್ಯರು, ಕೊಕ್ಕರ್ಣೆ ಗ್ರಾಮ ಪಂಚಾಯತಿ, ಉಡುಪಿ ತಾಲ್ಲೂಕು, ಉಡುಪಿ ಜಿಲ್ಲೆ ರವರಿಗೆ ನೀಡಲಾದ ತಿಳುವಳಿಕೆ ಪತ್ರವನ್ನು ದಿನಾಂಕ 05.09.2017 ರಂದು ಜಾರಿ ಮಾಡಿರುವುದಾಗಿ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಉಡುಪಿ ತಾಲ್ಲೂಕು ರವರು ವರದಿ ಸಲ್ಲಿಸಿರುತಾರೆ ಆದರೆ ಶ್ರೀ ಕೃಷ್ಣಯ್ಯ ಶೆಟ್ಟಿ, ಸದಸ್ಯರು, ಕೊಕ್ಕರ್ಣೆ ಗ್ರಾಮ ಪಂಚಾಯತಿ, ಉಡುಪಿ ತಾಲ್ಲೂಕು, ಉಡುಪಿ ಜಿಲ್ಲೆ ರವರು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ಇವರ ನ್ಯಾಯಾಲಯದಲ್ಲಿ ನಡೆದ ಮೌಖಿಕ ವಿಚಾರಣೆಗೆ ಗೈರು ಹಾಜರಾಗಿರುತ್ತಾರೆ.

ಶ್ರೀ ಕೃಷ್ಣಯ್ಯ ಶೆಟ್ಟಿ, ಸದಸ್ಯರು, ಕೊಕ್ಕರ್ಣೆ ಗ್ರಾಮ ಪಂಚಾಯತಿ, ಉಡುಪಿ ತಾಲ್ಲೂಕು, ಉಡುಪಿ ಜಿಲ್ಲೆ ರವರು ದಿನಾಂಕ: 28.04.2016, 31.05.2016, 30.06.2016 ಮತ್ತು 30.07.2016 ರಂದು ನಡೆದ ಗ್ರಾಮ ಪಂಚಾಯತಿಯ ಸಾಮಾನ್ಯ ಸಭೆಗಳಿಗೆ, ಪಂಚಾಯತಿಯ ಅನುಮತಿ ಇಲ್ಲದೆ ನಿರಂತರವಾಗಿ ನಾಲ್ಕು ಸಾಮಾನ್ಯ ಸಭೆಗಳಿಗೆ ಗೈರು ಹಾಜರಾಗಿರುವುದು ಕಂಡು ಬಂದಿರುವುದರಿಂದ ಸದರಿಯವರನ್ನು ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರಂತೆ ಕೊಕ್ಕರ್ಣೆ ಗ್ರಾಮ ಪಂಚಾಯತಿ ಸದಸ್ಯತ್ವದಿಂದ ತೆಗೆದುಹಾಕಲು ಸರ್ಕಾರವು ನಿರ್ಣಯಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/1141/ಗ್ರಾಪಂಅ/2016**

**ಬೆಂಗಳೂರು, ದಿನಾಂಕ: 17-10-2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಕೃಷ್ಣಯ್ಯ ಶೆಟ್ಟಿ, ಸದಸ್ಯರು, ಕೊಕ್ಕರ್ಣೆ ಗ್ರಾಮ ಪಂಚಾಯತಿ, ಉಡುಪಿ ತಾಲ್ಲೂಕು, ಉಡುಪಿ ಜಿಲ್ಲೆ ಇವರು ದಿನಾಂಕ: 28.04.2016, 31.05.2016, 30.06.2016 ಮತ್ತು 30.07.2016 ರಂದು ನಡೆದ ಗ್ರಾಮ ಪಂಚಾಯತಿಯ ಸಾಮಾನ್ಯ ಸಭೆಗಳಿಗೆ,

ಪಂಚಾಯತಿಯ ಅನುಮತಿ ಇಲ್ಲದೆ ನಿರಂತರವಾಗಿ ನಾಲ್ಕು ಸಾಮಾನ್ಯ ಸಭೆಗಳಿಗೆ ಗೈರು ಹಾಜರಾಗಿರುವುದರಿಂದ, ತಕ್ಷಣದಿಂದ ಜಾರಿಗೆ ಬರುವಂತೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ರನ್ವಯ ಕೊಕ್ಕರ್ಣೆ ಗ್ರಾಮ ಪಂಚಾಯತಿಯ ಸದಸ್ಯತ್ವ ಸ್ಥಾನದಿಂದ ತೆಗೆದುಹಾಕಿ ಆದೇಶಿಸಿದೆ.

(ಮಾನ್ಯ ಪ್ರಧಾನ ಕಾರ್ಯದರ್ಶಿಗಳು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರಿಂದ ಅನುಮೋದಿತ)

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿಗಳು:

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಉಡುಪಿ ಜಿಲ್ಲೆ,
2) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಉಡುಪಿ ತಾಲ್ಲೂಕು, ಉಡುಪಿ ಜಿಲ್ಲೆ
3) ಶ್ರೀ ಕೃಷ್ಣಯ್ಯ ಶೆಟ್ಟಿ, ಸದಸ್ಯರು, ಕೊಕ್ಕರ್ಣೆ ಗ್ರಾಮ ಪಂಚಾಯತಿ, ಉಡುಪಿ ತಾಲ್ಲೂಕು, ಉಡುಪಿ ಜಿಲ್ಲೆ
4) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕೊಕ್ಕರ್ಣೆ ಗ್ರಾಮ ಪಂಚಾಯತಿ, ಉಡುಪಿ ತಾಲ್ಲೂಕು, ಉಡುಪಿ ಜಿಲ್ಲೆ.
5) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.
6) ಗಣಕ ಕೋಶ